**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹೊನ್ನಾವರ.**

ಸಿಸಿ ನಂಃ 373/2025

ಸಿ ಡಬ್ಲುಃ 10

ಪಿ ಡಬ್ಲುಃ 5

| | |
|---|---|
| ಸಾಕ್ಷಿದಾರರ ಹೆಸರು | ಅಪ್ಪಣ್ಣ |
| ತಂದೆಯ ಹೆಸರು | ರಾಮಾ ಗೌಡ |
| ವಯಸ್ಸು | 54 |
| ಉದ್ಯೋಗ | ಎ ಎಸ್ ಐ ಹೊನ್ನಾವರ ಪಿ ಎಸ್ |
| ವಾಸ್ತವ್ಯ | ಹೊನ್ನಾವರ |

ಸಾಕ್ಷಿಯನ್ನು ದಿನಾಂಕ **07-04-2026** ರಂದು ಕರೆಸಲಾಯಿತು ಮತ್ತು ಪ್ರಮಾಣ ವಚನ ಮಾಡಿಸಲಾಯಿತು.

**ಮುಖ್ಯ ವಿಚಾರಣೆಃ ಸ.ಸ.ಅಭಿಯೋಜಕ ರವರಿಂದಃ**

ನಾನು, 2019 ರಿಂದ 2025 ರವರೆಗೆ ಮಂಕಿ ಪೋಲಿಸ್ ಠಾಣೆಯಲ್ಲಿ ಎ. ಎಸ್. ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 10-01-2025 ರಂದು ಮಂಕಿ ಪೊಲೀಸ್ ಠಾಣೆಯಲ್ಲಿ ಬೆಳಗ್ಗೆ ಎಸ್ ಹೆಚ್ ಓ ಕರ್ತವ್ಯದಲ್ಲಿದ್ದಾಗ 9-45 ಗಂಟೆಗೆ ಕೋರ್ಟ ಪಿಸಿ 561 ಮಂಜುನಾಥ ಚಿನ್ನಗುಡಿ ಇವರು ಮಾನ್ಯ ಜೆ ಎಂ ಎಫ್ ಸಿ ಹೊನ್ನಾವರ ನ್ಯಾಯಾಲಯದಿಂದ ಆದೇಶ ಸಂಖ್ಯೆ 49/2025 ನೇದ್ದರ ದಿಃ 08-01-2025 ರಂದು ಮಂಕಿ ಪೋಲೀಸ್ ಠಾಣೆಯ ಎನ್ ಸಿ ನಂ.1/2025 ರ ಆದೇಶ ಪ್ರತಿಯನ್ನು ಸ್ವೀಕರಿಸಿ ಪ್ರ.ವ.ವರದಿಯನ್ನು ದಾಖಲಿಸಿ ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇವೆ. ನಂತರ ಅದನ್ನು ಮುಂದಿನ ತನಿಖೆಗೆ ಚಾಸಾ11 ರವರಿಗೆ ನೀಡಿರುತ್ತೇವೆ. ಆದೇಶ ಪ್ರತಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ಅದನ್ನು **ನಿಪಿ.5** ಎಂದು, ಸಾಕ್ಷಿಯ ಸಹಿಯನ್ನು **ನಿಪಿ.5(ಎ)** ಎಂದು ಗುರುತಿಸಲಾಯಿತು. ಪ್ರ.ವ.ವರದಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ಅದನ್ನು **ನಿಪಿ.6** ಎಂದು, ಸಾಕ್ಷಿಯ ಸಹಿಯನ್ನು **ನಿಪಿ.6(ಎ)** ಎಂದು ಗುರುತಿಸಲಾಯಿತು.

**ಆರೋಪಿ ಪರ ವಕೀಲರು ಪಾಟಿ ಸವಾಲು ಇಲ್ಲ ಎಂದು ಹೇಳಿರುತ್ತಾರೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತಗೊಳಿಸಲಾಯಿತು.)

ಓ ಹೆ ಕೇ ಸರಿ ಇದೆ.

**-Sd/-**

**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾದಂ..**

**ಹೊನ್ನಾವರ.**